**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 3034/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ** 01

**ದಿನಾಂಕಃ** 11.08.2026 **ಸಿಡಬ್ಲ್ಯೂ** 02

| | |
|---|---|
| ಹೆಸರು | ವಿನಯ್ ಪಾಟೀಲ |
| ತಂದೆಯ ಹೆಸರು | ರೇವಣಸಿದ್ದಪ್ಪ ಜಿ ಎಸ |
| ವಯಸ್ಸು | 33 ವರ್ಷ |
| ಉದ್ಯೋಗ | ಚಾಲಕ |
| ವಾಸ ಸ್ಥಳ | ಬೆಳ್ಳೂಡಿ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ಸುಮಾರು 2 ವರ್ಷಗಳ ಹಿಂದೆ ಠಾಣೆಗೆ ಹೋದಾಗ ಪೊಲೀಸರು ನನ್ನ ಸಹಿ ಪಡೆದಿರುತ್ತಾರೆ. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತುಪಡಿಸಿಕೊಂಡಿಲ್ಲ. ಸಾಕ್ಷಿಯು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು ಅದನ್ನು ನಿಪಿ.1 ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನೋಟಿಸನ್ನು ಗುರುತಿಸಿದ್ದು ಅದನ್ನು ನಿಪಿ.2 ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 30.06.2023 ಹರಿಹರ ಗ್ರಾಮಾಂತರ ಪೊಲೀಸರು ಸಲಗನಹಳ್ಳಿ ಗ್ರಾಮದ ಅರಳೀಪುರದ ರವಿ ತಂದೆ ಪದ್ಮಪ್ಪನವರ ಮನೆಗೆ ದಾಳಿ ಮಾಡಲು ಹೋಗುವುದಿದೆ ತಾವು ಪಂಚರಾಗಿ ಸಹಕರಿಸಬೇಕೆಂದು ಕೇಳಿಕೊಂಡಿದ್ದರಿಂದ ನಾವು ರಾತ್ರಿ 8.00 ಕ್ಕೆ ಠಾಣೆಯಿಂದ ಹೊರಟು ಆರೋಪಿ ಮನೆ ಮುಂದೆ ನೋಡಲಾಗಿ ಅಲ್ಲಿ ಒಬ್ಬ ವ್ಯಕ್ತಿ ಒಂದು ಪ್ಲಾಸ್ಟಿಕ್ ಚೀಲದಲ್ಲಿ ಏನೋ ಇಟ್ಟುಕೊಂಡು ನಿಂತಿದ್ದು ಅವನ ಮೇಲೆ ದಾಳಿ ಮಾಡಿ 180 ಎಂ ಎಲ್ ಒ ಟಿ ವಿಸ್ಕಿ 4 ಪೌಚುಗಳು, 90 ಎಂ ಎಲ್ ಒಸಿ ವಿಸ್ಕಿ 24 ಪೌಚುಗಳು , 330 ಎಂ ಎಲ್ ನ ಕಿಂಗ್ ಪಿಶರ್ 7 ಟಿನ್ ಗಳನ್ನು ರಾತ್ರಿ 8.50 ರಿಂದ 9.50 ಗಂಟೆ ವರೆಗೆ ಪಂಚನಾಮೆ ಮಾಡಿ ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಮಾಡಿದ್ದರೂ ಸಹ ನಾನು ಆರೋಪಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ.